ಕೆರೆ ತುಂಬುವ ಯೋಜನೆ

9 (27) ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇಂಡಿ ವಿಧಾನಸಭಾ ಕ್ಷೇತ್ರದಲ್ಲಿ ಕೆರೆ ತುಂಬುವ ಯೋಜನೆ ಅನುಷ್ಠಾನ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕ್ಷೇತ್ರದ ಯಾವ ಯಾವ ಪ್ಯಾಕೇಜಿನಲ್ಲಿ ಯಾವ ಯಾವ ಕೆರೆಗಳನ್ನು ತುಂಬಲಾಗುವುದು;

ಇ) ಈ ಪ್ಯಾಕೇಜುಗಳ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು? (ವಿವರ ಒದಗಿಸುವುದು)

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಸರ್ಕಾರದ ಮುಂದಿದೆ.

ಆ) ಸಂಕ್ ಲಿಫ್ಟ್ ಪ್ಯಾಕೇಜ್ ರಡಿ 4 ಕೆರೆಗಳನ್ನು ಅಣಚಿ ಲಿಫ್ಟ್ ಪ್ಯಾಕೇಜ್ ರಡಿ 8 ಕೆರೆಗಳನ್ನು ತುಂಬಿಸಲು ಯೋಜಿಸಲಾಗಿದೆ.

ಇ) ಸಂಕ್ ಲಿಫ್ಟ್ ಪ್ಯಾಕೇಜ್ ರಡಿ ಅಂದಾಜು ಪತ್ರಿಕೆ, ಡಿಟಿಪಿ ಇವುಗಳನ್ನು ಸಲ್ಲಿಸುವ ಹಂತದಲ್ಲಿದೆ. ಅಣಚಿ ಲಿಫ್ಟ್ ರಡಿ ಕಾಮಗಾರಿಗಳಿಗೆ ಟೆಂಡರ್ ನೋಟಿಫಿಕೇಷನ್ ಹೊರಡಿಸಲಾಗಿದ್ದು, ಟೆಂಡರ್ ಪ್ರಕ್ರಿಯೇ ಜಾರಿಯಲ್ಲಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಕಾಲುವೆಗಳಲ್ಲಿ ಹೂಳು ತುಂಬಿರುವುದು

14 (43) ಶ್ರೀ ಯು.ಟಿ. ಖಾದರ್ (ಮಂಗಳೂರು) : ಮಾನ್ಯ ಸಣ್ಣ ನೀರಾವರಿ, ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕಾಲುವೆಗಳಲ್ಲಿ (ಒಳಹರಿವು ಮತ್ತು ಹೊರ ಹರಿವಿನ ಕಾಲುವೆಗಳಲ್ಲಿ) ಹೂಳು ತುಂಬಿರುವುದರಿಂದ ಮಳೆಗಾಲದಲ್ಲಿ ರೈತರ ಜಮೀನುಗಳಿಗೆ ನೀರು ನುಗ್ಗಿ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕಾಲುವೆಗಳಲ್ಲಿ ತುಂಬಿರುವ ಹೂಳನ್ನು ತೆಗೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಯೋಜನೆ) :

ಅ) ಬಂದಿದೆ.

ಆ) ಅನುದಾನದ ಕೊರತೆಯಿಂದಾಗಿ ಎಲ್ಲಾ ಹಳ್ಳಗಳಲ್ಲಿನ ಹೂಳು ತೆಗೆಯುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತಿಲ್ಲ. 2009–10ನೇ ಸಾಲಿನಲ್ಲಿ ಮಂಗಳೂರು ತಾಲ್ಲೂಕಿನ ಕಂದಾವರ ಗ್ರಾಮದ ದೂಮಾವತಿ ದೇವಸ್ಥಾನದಿಂದ ಮೂರುತೋಡು ಮಸೀದಿವರೆಗೆ ದೊಡ್ಡ ತೋಡಿನಿಂದ ಹೂಳೆತ್ತಿ ತಡೆಗೋಡೆ ನಿರ್ಮಿಸುವ ಕಾಮಗಾರಿಯನ್ನು ರೂ. 32.50 ಲಕ್ಷ ಅಂದಾಜು ಮೊತ್ತದಲ್ಲಿ ನವಾರ್ಡ್ ಆರ್.ಐ.ಡಿ.ಎಫ್.–15ರಡಿ ಕೈಗೆತ್ತಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ.

ಮಂಗಳೂರಿನ SEZ ನ ಯೋಜನೆಗೆ ಜಮೀನು ನೀಡಿದವರಿಗೆ ಉದ್ಯೋಗ

15 (44) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಮಂಗಳೂರಿನಲ್ಲಿ ವಿಶೇಷ ಆರ್ಥಿಕ ವಲಯ ಸ್ಥಾಪಿಸಲು ಸ್ವಾಧೀನಪಡಿಸಿಕೊಂಡ ಜಮೀನಿನ ಮಾಲೀಕರ ಎಷ್ಟು ಕುಟುಂಬಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆ? (ವಿವರ ಒದಗಿಸುವುದು);

ಆ) ಉಳಿದ ನಿರಾಶ್ರಿತ ಕುಟುಂಬಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲು ಇರುವ ತೊಂದರೆಗಳೇನು?

ಇ) ಹಾಗಿದ್ದಲ್ಲಿ, ಇವರುಗಳಿಗೆ ಉದ್ಯೋಗಾವಕಾಶವನ್ನು ಎಷ್ಟು ದಿನಗಳಲ್ಲಿ ಕಲ್ಪಿಸಲಾಗುವುದು? (ವಿವರ ಒದಗಿಸುವುದು);

ಶ್ರೀ ಮುರುಗೇಶ್ ಆರ್. ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಮಂಗಳೂರಿನಲ್ಲಿ ಎಂ.ಎಸ್.ಈ.ಜಡ್.ಎಲ್ ರವರ ವಿಶೇಷ ಆರ್ಥಿಕ ವಲಯ ಸ್ಥಾಪಿಸಲು ಸ್ವಾಧೀನಪಡಿಸಿಕೊಂಡ ಜಮೀನಿನ ನಿರ್ವಸಿತರ ಕುಟುಂಬಗಳ